ಶ್ರೀ ಎಂ. ಮಲ್ಲಿಕಾರ್ಜುನ ಖಿರ್ಗೆ (ಕಂದಾಯ ಸಚಿವರು) :-

ಅ) 5 ಕಾಯಿದೆಗಳು.

1) ಹೈದರಾಬಾದ್ ಎಂಡೋಮೆಂಟ್ ರೆಗ್ಯುಲೇಷನ್, 1349.
2) ಹಿಂದು ಮತೀಯ ಮತ್ತು ಧಾರ್ಮಿಕ ದತ್ತಿ ಕಾಯಿದೆ, 1951.
3) ಬಾಂಬೆ ಸಾರ್ವಜನಿಕ ಚಿಮ್ಮೆ ಕಾಯಿದೆ, 1950.
4) ಕೊಡಗು ದೇವಸ್ಥಾನಗಳ ನಿಧಿ ಆಡಳಿತ ಕಾಯಿದೆ, 1956.
5) ಮೈಸೂರು ಮತೀಯ ಮತ್ತು ಧಾರ್ಮಿಕ ಸಂಸ್ಥೆಗಳ ಕಾಯಿದೆ, 1927.

ಆ) ಆದಷ್ಟು ಬೇಗ ಈ ವಿಕರೂಪ ಕಾಯಿದೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ :- ಜಿಲ್ಲಾ ಮತ್ತು ತಾಲ್ಲೂಕುಗಳ ಪುನರ್‌ವಿಂಗಡಣೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 706 (1068)

ಶ್ರೀ ಬಸವರಾಜ್ ರಾಯರೆಡ್ಡಿ (ಯಲ್ಬುರ್ಗಿ) :- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸರ್ಕಾರವು ಜಿಲ್ಲೆ ಮತ್ತು ತಾಲ್ಲೂಕುಗಳನ್ನು ಪುನರ್‌ವಿಂಗಡಿಸಲು ಯೋಚಿಸಿದೆಯೇ ?

ಆ) ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಜಿಲ್ಲೆ ಮತ್ತು ತಾಲ್ಲೂಕುಗಳನ್ನು ರಾಜ್ಯದಲ್ಲಿ ಪುನರ್‌ವಿಂಗಡಿಸ ಲಾಗುವುದು ?

ಇ) ಈ ಬಗ್ಗೆ ಸರ್ಕಾರವು ಜಿಲ್ಲೆ ಮತ್ತು ತಾಲ್ಲೂಕುಗಳನ್ನು ಗುರುತಿಸಿದೆಯೇ ?

ಶ್ರೀ ಎಂ. ಮಲ್ಲಿಕಾರ್ಜುನ ಖಿರ್ಗೆ (ಕಂದಾಯ ಸಚಿವರು) :-

ಅ) ಹೌದು.

ಆ) ಜಿಲ್ಲಾ ಪುನರ್ ವಿಂಗಡಣಾ ವರದಿಗಳ ಶಿಫಾರಸುಗಳ ಕೂಲಂಕುಷ ಅಧ್ಯಯನಕ್ಕಾಗಿ ಸಚಿವ-ಸಂಪುಟ ಉಪ ಸಮಿತಿಯನ್ನು ರಚಿಸಿದೆ.

ಇ) ಇಲ್ಲ.

ವಿಷಯ :- ಬಾಡಿಗೆ ಮತ್ತು ವಸತಿ ನಿಯಂತ್ರಣ ಕಾಯಿದೆಗೆ ತಿದ್ದುಪಡಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 707 (1055)

ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) :- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹಾಲಿ ಜಾರಿಯಲ್ಲಿರುವ ಬಾಡಿಗೆ ಮತ್ತು ವಸತಿ ನಿಯಂತ್ರಣ ಕಾಯಿದೆಯು ತುಂಬಾ ಹಳೆಯ ದಾಗಿದ್ದು ಮತ್ತು ಇದರಿಂದ ಮನೆ ಮಾಲೀಕರಿಗೆ ಮತ್ತು ಬಾಡಿಗೆದಾರರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಹಿಂದಿನ ವಿಧಾನ ಸಭೆಯು ಜಂಟಿ ಆಯ್ಕೆ ಸಮಿತಿಯನ್ನು ರಚಿಸಿರುವುದು ನಿಜವೇ ?

ಇ) ಹಾಗಿದ್ದಲ್ಲಿ ಈ ವಿಷಯದ ಬಗ್ಗೆ ಸಮಗ್ರ ತಿದ್ದುಪಡಿ ಶಾಸನವನ್ನು ಜಾರಿಗೆ ತರುವ ಪ್ರಸ್ತಾವನೆ ಇದೆಯೇ ?

ಶ್ರೀ ಎಂ. ಮಲ್ಲಿಕಾರ್ಜುನ ಖಿರ್ಗೆ (ಕಂದಾಯ ಸಚಿವರು) :

ಅ) ಹೌದು.

ಆ) ಶ್ರೀಮತಿ ಪ್ರಮೀಳಾ ಸಮಿತಿಯ ವರದಿಯ ಆಧಾರದ ಮೇಲೆ ಸಮಗ್ರ ತಿದ್ದುಪಡಿ ಮಸೂದೆಯನ್ನು ಮಂಡಿಸಲಾಗಿತ್ತು. ನಂತರ ಇದನ್ನು ಹಿಂದಿನ ವಿಧಾನಮಂಡಲದ ಜಂಟಿ ಆಯ್ಕೆ ಸಮಿತಿಗೆ ಸಲ್ಲಿಸಲಾಗಿದೆ.

ಇ) ಹೌದು.